**All India Radio: Bangalore**
**National Bulletin In Kannada**
**06.04.2026 13.10 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**06.04.2026 13.10 hrs**

**<>><><*><><<>**

ಮುಖ್ಯಾಂಶಗಳು

**೧. ಪಂಚ ರಾಜ್ಯ ವಿಧಾನಸಭಾ ಚುನಾವಣೆ ; ಬಿಜೆಪಿ, ಕಾಂಗ್ರೆಸ್ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳಿಂದ ಪ್ರಚಾರ ಕಾರ್ಯ ಚುರುಕು**

**೨. ರಾಜ್ಯಸಭೆಯ ನೂತನ ಸದಸ್ಯರಿಗೆ ಸಭಾಪತಿ ಸಿ.ಪಿ.ರಾಧಾಕೃಷ್ಣನ್ ಪ್ರಮಾಣವಚನ ಬೋಧನೆ**

**೩. ಸೈನಿಕರಿಗೆ ಅತ್ಯುತ್ತಮ ಆರೋಗ್ಯ ಸೌಲಭ್ಯ ನೀಡುವುದು ಕೇಂದ್ರ ಸರ್ಕಾರದ ಆದ್ಯತೆ - ರಕ್ಷಣಾ ಸಚಿವ ರಾಜನಾಥ್ ಸಿಂಗ್**

**೪. ನಾಗರಿಕ ಮೂಲಸೌಕರ್ಯಗಳ ಮೇಲೆ ದಾಳಿಯಾದರೆ ಭೀಕರ ಪ್ರತೀಕಾರ ; ಅಮೆರಿಕಗೆ ಇರಾನ್ ಎಚ್ಚರಿಕೆ**

**೫. ಐಪಿಎಲ್ ಟಿ-೨೦ ಕ್ರಿಕೆಟ್ ; ಈಡನ್ ಗಾರ್ಡನ್ಸ್‌ನಲ್ಲಿಂದು ಕೊಲ್ಕತ್ತಾ ನೈಟ್ ರೈಡರ್ಸ್-ಪಂಜಾಬ್ ಕಿಂಗ್ಸ್ ಮುಖಾಮುಖಿ**

**<>><><*><><<>**

ಅಸ್ಸಾಂ, ಕೇರಳ, ಪಶ್ಚಿಮ ಬಂಗಾಳ, ತಮಿಳುನಾಡು ಮತ್ತು ಪುದುಚೇರಿ ಸೇರಿದಂತೆ ೪ ರಾಜ್ಯ ಹಾಗೂ ಒಂದು ಕೇಂದ್ರಾಡಳಿತ ಪ್ರದೇಶದಲ್ಲಿ ನಡೆಯಲಿರುವ ವಿಧಾನಸಭಾ ಚುನಾವಣೆಗಳಿಗೆ ವಿವಿಧ ರಾಜಕೀಯ ಪಕ್ಷಗಳು ತಮ್ಮ ತಮ್ಮ ಅಭ್ಯರ್ಥಿಗಳ ಪರ ಪ್ರಚಾರ ಕಾರ್ಯ ಚುರುಕುಗೊಳಿಸಿವೆ. ಬಿಜೆಪಿ ಹಿರಿಯ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರಿಂದು ಅಸ್ಸಾಂನ ಬಾರ್ಪೆಟಾದಲ್ಲಿ ಬೃಹತ್ ಚುನಾವಣಾ ರ್‍ಯಾಲಿಯಲ್ಲಿ ಪಾಲ್ಗೊಂಡರು. ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಅವರು, ಸತತ ೩ನೇ ಬಾರಿ ಅಸ್ಸಾಂನಲ್ಲಿ ಬಿಜೆಪಿ ಪಕ್ಷ ಸರ್ಕಾರ ರಚಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಪಕ್ಷ ಸುದೀರ್ಘ ದೃಷ್ಟಿಕೋನ ಹಾಗೂ ದೂರದೃಷ್ಟಿಯೊಂದಿಗೆ ಕಾರ್ಯನಿರ್ವಹಿಸುತ್ತಿದೆ. ವಿಕಸಿತ ಅಸ್ಸಾಂ ನಿರ್ಮಾಣದ ಮೂಲಕ ವಿಕಸಿತ ಭಾರತದ ಗುರಿಯನ್ನು ನನಸಾಗಿಸಲು ಬಿಜೆಪಿ ಶ್ರಮಿಸುತ್ತಿದೆ. ಕಳೆದ ೧೦ ವರ್ಷಗಳಲ್ಲಿ ಅಸ್ಸಾಂನಲ್ಲಿ ಶಾಂತಿ ಮತ್ತು ಸಾಮರಸ್ಯ ನೆಲೆಸಲು ಸರ್ಕಾರ ಶ್ರಮಿಸಿದ್ದು, ಮುಂಬರುವ ವರ್ಷಗಳಲ್ಲಿ ರಾಜ್ಯದಲ್ಲಿ ಸಮೃದ್ಧಿಯನ್ನು ಮತ್ತಷ್ಟು ವಿಸ್ತರಿಸಲಿದೆ ಎಂದು ತಿಳಿಸಿದ್ದಾರೆ. ಪುದುಚೇರಿ ವಿಧಾನಸಭಾ ಹಿನ್ನೆಲೆಯಲ್ಲಿ ಕಾಂಗ್ರೆಸ್ ನಾಯಕ ಹಾಗೂ ಲೋಕಸಭೆ ವಿರೋಧಪಕ್ಷದ ನಾಯಕ ರಾಹುಲ್ ಗಾಂಧಿ ಪುದುಚೇರಿಯ ಲಾಸ್‌ಪೇಟ್‌ನಲ್ಲಿ ಸಾರ್ವಜನಿಕ

ಸಭೆಯನ್ನುದ್ದೇಶಿಸಿ ಮಾತನಾಡಿದರು. ಈ ವೇಳೆ ಅವರು ಪುದುಚೇರಿಗೆ ಪೂರ್ಣ ರಾಜ್ಯಸ್ಥಾನಮಾನ ನೀಡಲು ಕಾಂಗ್ರೆಸ್ ಬದ್ಧವಾಗಿದೆ ಎಂದು ಪುನರುಚ್ಚರಿಸಿದರು. ತಮ್ಮ ಮೈತ್ರಿಕೂಟ ಅಧಿಕಾರಕ್ಕೆ ಬಂದರೆ ನಿರುದ್ಯೋಗಿ ಯುವಕರಿಗೆ ಮಾಸಿಕ ೨ ಸಾವಿರ ರೂಪಾಯಿ ಆರ್ಥಿಕ ನೆರವು ಹಾಗೂ ಸಾರ್ವಜನಿಕ ಮತ್ತು ಖಾಸಗಿ ವಲಯಗಳಲ್ಲಿ ೩೦ ಸಾವಿರ ಹೊಸ ಉದ್ಯೋಗಗಳನ್ನು ಸೃಷ್ಟಿಸುವುದಾಗಿ ಅವರು ಘೋಷಿಸಿದರು. ಮತ್ತೊಂದೆಡೆ ಹಿರಿಯ ಬಿಜೆಪಿ ನಾಯಕ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಪುದುಚೇರಿಗೆ ಆಗಮಿಸಲಿದ್ದು, ಎನ್‌ಡಿಎ ಅಭ್ಯರ್ಥಿಗಳ ಪರವಾಗಿ ಪ್ರಚಾರ ನಡೆಸಲಿದ್ದಾರೆ. ತಮಿಳುನಾಡು ಮುಖ್ಯಮಂತ್ರಿ ಮತ್ತು ಡಿಎಂಕೆ ನಾಯಕ ಎಂ.ಕೆ.ಸ್ಟಾಲಿನ್ ಸಹ ಇಂದು ಸಂಜೆ ಪುದುಚೇರಿಯಲ್ಲಿ ತಮ್ಮ ಪಕ್ಷದ ಅಭ್ಯರ್ಥಿಗಳ ಪರ ಮತಯಾಚಿಸಲಿದ್ದಾರೆ.

<>><><*><><<>

ರಾಜ್ಯಸಭೆಯ ಸಭಾಪತಿ ಸಿ.ಪಿ.ರಾಧಾಕೃಷ್ಣನ್ ಅವರಿಂದು ರಾಜ್ಯಸಭೆಗೆ ನೂತನವಾಗಿ ಆಯ್ಕೆಯಾಗಿರುವ ಸದಸ್ಯರಿಗೆ ಪ್ರಮಾಣವಚನ ಬೋಧಿಸಿದರು. ಕೇಂದ್ರ ಸಚಿವ ರಾಮ್‌ದಾಸ್ ಅಠಾವಳೆ ಮತ್ತು ಎನ್‌ಸಿಪಿ, ಎಸ್‌ಸಿಪಿ ಹಿರಿಯ ನಾಯಕ ಶರದ್ ಚಂದ್ರಪವಾರ್ ರಾಜ್ಯಸಭೆಯ ಸದಸ್ಯರಾಗಿ ಅಧಿಕೃತ ಪ್ರಮಾಣವಚನ ಸ್ವೀಕರಿಸಿದರು. ಈ ಇಬ್ಬರು ನಾಯಕರು ಮಹಾರಾಷ್ಟ್ರದಿಂದ ರಾಜ್ಯಸಭೆಗೆ ಮರು ಆಯ್ಕೆಯಾಗಿದ್ದಾರೆ. ಇದರ ಜೊತೆಗೆ ಸಂತೃಪ್ತ ಮಿಶ್ರ ಮನ್‌ಮೋಹನ್ ಸಾಮಲ್, ಡಾ.ಜ್ಯೋತಿ ನಾಗನಾಥ್ ವಾಗ್ಮಾರೆ ಮತ್ತು ರಾಮ್‌ರಾವ್ ಸುಖಾರಾಮ್ ವಾಡ್‌ಕುಟೆ ಸೇರಿದಂತೆ ಇತರ ನೂತನ ಸದಸ್ಯರಿಗೂ ಸಭಾಪತಿಗಳು ಪ್ರಮಾಣವಚನ ಬೋಧಿಸಿದರು.

<>><><*><><<>

ದೇಶದ ಸೈನಿಕರಿಗೆ ಅತ್ಯುತ್ತಮ ವೈದ್ಯಕೀಯ ಸೌಲಭ್ಯ ಒದಗಿಸುವುದು ಕೇಂದ್ರ ಸರ್ಕಾರದ ಪ್ರಮುಖ ಆದ್ಯತೆಯಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ನಡೆದ ಆರ್ಮಿ ಮೆಡಿಕಲ್ ಕೋರ್ ಸಂಸ್ಥಾಪನಾ ದಿನಾಚರಣೆಯನ್ನುದ್ದೇಶಿಸಿ ಮಾತನಾಡಿದ ಅವರು, ಕಠಿಣ ಹವಾಮಾನ ಮತ್ತು ಕಷ್ಟಕರ ಪರಿಸ್ಥಿತಿಗಳಲ್ಲಿ ಹಗಲಿರುಳು ದೇಶ ಸೇವೆ ಮಾಡುವ ಸೈನಿಕರ ಆರೋಗ್ಯ ಮತ್ತು ಯೋಗಕ್ಷೇಮವನ್ನು ಕಾಪಾಡುವುದು ನಮ್ಮ ಕರ್ತವ್ಯವಾಗಿದೆ ಎಂದರು. ದೆಹಲಿಯಲ್ಲಿರುವ ರಿಸರ್ಚ್ ಅಂಡ್ ರೆಫರಲ್ ಆಸ್ಪತ್ರೆಯಂತಹ ಉನ್ನತ ದರ್ಜೆಯ ವೈದ್ಯಕೀಯ ಸಂಸ್ಥೆಗಳು ದೇಶದ ಇತರ ಭಾಗಗಳಲ್ಲೂ ಅಭಿವೃದ್ಧಿಯಾಗಬೇಕು ಎಂದ ಅವರು, ಇದರಿಂದಾಗಿ ಸೇನೆಯ ಎಲ್ಲಾ ವಿಭಾಗಗಳಿಗೆ ಎಲ್ಲೆಡೆ ಉತ್ತಮ ವೈದ್ಯಕೀಯ ಚಿಕಿತ್ಸೆ ಸುಲಭವಾಗಿ ಸಿಗುವಂತಾಬೇಕು ಎಂದರು.

<>><><*><><<>

ಭಾರತೀಯ ಜನತಾ ಪಾರ್ಟಿ-ಬಿಜೆಪಿಯ ೪೭ನೇ ಸಂಸ್ಥಾಪನಾ ದಿನದ ಅಂಗವಾಗಿ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಪಕ್ಷದ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಪಕ್ಷದ ಸಮಸ್ತ ಕಾರ್ಯಕರ್ತರಿಗೆ ಶುಭಾಶಯ ಕೋರಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಸಂದೇಶ

ಹಂಚಿಕೊಂಡಿರುವ ಪ್ರಧಾನಿ, ಭಾರತ ಮೊದಲು ಎಂಬ ತತ್ವದೊಂದಿಗೆ ಬಿಜೆಪಿ ಯಾವಗಾಲೂ ಸಮಾಜ ಸೇವೆಯಲ್ಲಿ ಮುಂಚೂಣಿಯಲ್ಲಿದೆ ಎಂದು ಶ್ಲಾಘಿಸಿದ್ದಾರೆ. ಬಿಜೆಪಿ ಕಾರ್ಯಕರ್ತರು ತಮ್ಮ ನಿಸ್ವಾರ್ಥ ಸೇವೆ, ಅಚಲ ಸಮರ್ಪಣೆ ಮತ್ತು ಉತ್ತಮ ಆಡಳಿತದ ಬದ್ಧತೆಗೆ ಹೆಸರಾಗಿದ್ದಾರೆ ಎಂದಿರುವ ಅವರು, ದಶಕಗಳಿಂದ ಪಕ್ಷದ ಬೆಳವಣಿಗೆಗೆ ಶ್ರಮಿಸಿದ ಮತ್ತು ತ್ಯಾಗಗೈದ ಅಸಂಖ್ಯಾತ ಕಾರ್ಯಕರ್ತರನ್ನು ಸ್ಮರಿಸಿದ್ದಾರೆ. ಕೇರಳದ ತಿರುವನಂತಪುರಂನಲ್ಲಿರುವ ಪಕ್ಷದ ರಾಜ್ಯ ಪ್ರಧಾನ ಕಚೇರಿ ಮಾರಾರ್ಜಿ ಭವನದಲ್ಲಿ ಬಿಜೆಪಿ ಹಿರಿಯ ನಾಯಕ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ, ಬಿಜೆಪಿ ಪಕ್ಷದ ಧ್ವಜಾರೋಹಣ ಮಾಡಿದರು.

**<>><><*><><<>**

ತನ್ನ ದೇಶದ ನಾಗರಿಕ ಮೂಲಸೌಕರ್ಯಗಳ ಮೇಲೆ ಅಮೆರಿಕ ದಾಳಿ ನಡೆಸಿದರೆ ಅತ್ಯಂತ ವಿನಾಶಕಾರಿ ಮತ್ತು ವ್ಯಾಪಕ ಪ್ರತೀಕಾರ ಎದುರಿಸಬೇಕಾಗುತ್ತದೆ ಎಂದು ಇರಾನ್ ಎಚ್ಚರಿಸಿದೆ. ಇರಾನ್‌ನ ಪರಮೋಚ್ಚ ನಾಯಕರ ಸಲಹೆಗಾರ ಅಲಿ ಅಕ್ಬರ್ ವೆಲಾಯತಿ, ಈ ಕುರಿತು ಮಾತನಾಡಿದ್ದು, ಇರಾನ್ ಪ್ರತಿರೋಧ ಪಡೆಗಳು ಬಾಬ್-ಎಲ್-ಮಾಂಡೇಬ್ ಜಲಸಂಧಿಯನ್ನು ಗುರಿಯಾಗಿಸಿಕೊಳ್ಳಬಲ್ಲವು ಮತ್ತು ಕೇವಲ ಒಂದು ಸಂಕೇತದ ಮೂಲಕ ಜಾಗತಿಕ ಇಂಧನ ಹಾಗೂ ವ್ಯಾಪಾರದ ಹರಿವನ್ನು ಅಸ್ತವ್ಯಸ್ತಗೊಳಿಸಬಹುದು ಎಂದು ಎಚ್ಚರಿಕೆ ನೀಡಿದ್ದಾರೆ. ಕೆಂಪು ಸಮುದ್ರವನ್ನು ಅಡೆನ್ ಕೊಲ್ಲಿಗೆ ಸಂಪರ್ಕಿಸುವ ಬಾಬ್ ಎಲ್-ಮಾಂಡೇಬ್ ಜಲಸಂಧಿಯು ಅಟ್ಲಾಂಟಿಕ್, ಹಿಂದೂ ಮಹಾಸಾಗರ ಮತ್ತು ಮೆಡಿಟರೇನಿಯನ್ ನಡುವಿನ ಹಡಗು ಸಂಚಾರಕ್ಕೆ ಅತ್ಯಂತ ಪ್ರಮುಖ ಕೊಂಡಿಯಾಗಿದೆ. ಒಂದು ವೇಳೆ ಈ ಮಾರ್ಗದಲ್ಲಿ ಸಂಚಾರ ಸ್ಥಗಿತಗೊಂಡರೆ ಜಾಗತಿಕ ಆರ್ಥಿಕತೆಯ ಮೇಲೆ ಭೀಕರ ಪರಿಣಾಮ ಬೀರಲಿದೆ. ಇದಕ್ಕೂ ಮೊದಲು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು, ಹೋರ್ಮುಜ್ ಜಲಸಂಧಿಯನ್ನು ಮುಕ್ತಗೊಳಿಸದಿದ್ದರೆ ಇರಾನ್‌ನ ವಿದ್ಯುತ್ ಸ್ಥಾವರಗಳು ಮತ್ತು ಸೇತುವೆಗಳಂತಹ ನಾಗರಿಕ ಮೂಲಸೌಕರ್ಯಗಳನ್ನು ಧ್ವಂಸಗೊಳಿಸುವುದಾಗಿ ಬೆದರಿಕೆ ಹಾಕಿದ್ದರು.

**<>><><*><><<>**

ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಭಾರತ ಮತ್ತು ಜಪಾನ್ ನಡುವಿನ ಸಹಕಾರ ದೇಶದ ಜಾಗತಿಕ ಸಂಬಂಧಗಳ ಪ್ರಮುಖ ಸ್ತಂಭಗಳಲ್ಲಿ ಒಂದಾಗಿದೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ.ಜಿತೇಂದ್ರ ಸಿಂಗ್ ತಿಳಿಸಿದ್ದಾರೆ. ಭಾರತ-ಜಪಾನ್ ವಿಜ್ಞಾನ, ತಂತ್ರಜ್ಞಾನ ಮತ್ತು ನಾವೀನ್ಯತೆ ವಿನಿಮಯ ವರ್ಷದ ಸಮಾರೋಪ ಸಮಾರಂಭದಲ್ಲಿ ವರ್ಚುವಲ್ ಮೂಲಕ ಪಾಲ್ಗೊಂಡು ಮಾತನಾಡಿದ ಅವರು, ೪೦ ಉಭಯ ರಾಷ್ಟ್ರಗಳ ನಡುವಿನ ೪೦ ವರ್ಷಗಳ ದ್ವಿಪಕ್ಷೀಯ ಪಾಲುದಾರಿಕೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಬೆಳೆಯುತ್ತಿರುವ ಸಹಯೋಗವನ್ನು ಸ್ಮರಿಸಿ ಶ್ಲಾಘನೆ ವ್ಯಕ್ತಪಡಿಸಿದರು. ಕಳೆದ ವರ್ಷ ಪ್ರಧಾನಿ ನರೇಂದ್ರ ಮೋದಿ, ಜಪಾನ್‌ಗೆ ಭೇಟಿ ನೀಡಿದ್ದ ವೇಳೆ ಸಹಿ ಹಾಕಲಾದ ಒಪ್ಪಂದಗಳು ಸಂಶೋಧನೆ, ನವೋದ್ಯಮಗಳು ಮತ್ತು ಕೈಗಾರಿಕಾ ಕ್ಷೇತ್ರಗಳಲ್ಲಿನ ಬಾಂಧವ್ಯವನ್ನು ಮತ್ತಷ್ಟು ವಿಸ್ತರಿಸಿದೆ ಎಂದು ತಿಳಿಸಿದರು. ಆರೋಗ್ಯ

ರಕ್ಷಣೆ ಮತ್ತು ಇಸ್ರೋ ಹಾಗೂ ಜಪಾನ್‌ನ ಜಾಕ್ಸಾ ಸಂಸ್ಥೆಗಳು ಜಂಟಿಯಾಗಿ ಕೈಗೊಂಡಿರುವ ಚಂದ್ರಯಾನ ಮಿಷನ್ ಲುಪೆಕ್ಸ್‌ನಂತಹ ಮಹತ್ವದ ಯೋಜನೆಗಳ ಪ್ರಗತಿಯನ್ನು ಸಚಿವರು ಪ್ರಸ್ತಾಪಿಸಿದರು.

**<>><><*><><<>**

ಅರುಣಾಚಲಪ್ರದೇಶ ಸರ್ಕಾರದ ಸಾರ್ವಜನಿಕ ಗುತ್ತಿಗೆಗಳ ಹಂಚಿಕೆಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಕುರಿತು ಪ್ರಾಥಮಿಕ ತನಿಖೆ ನಡೆಸುವಂತೆ ಸುಪ್ರೀಂಕೋರ್ಟ್ ಇಂದು ಕೇಂದ್ರ ತನಿಖಾದಳ ಸಿಬಿಐಗೆ ಆದೇಶಿಸಿದೆ. ಮುಖ್ಯಮಂತ್ರಿ ಪೇಮಾ ಖಂಡು ಮತ್ತು ಅವರ ಆಪ್ತ ಸಂಬಂಧಿಕರಿಗೆ ಸೇರಿದ ಕಂಪನಿಗಳಿಗೆ ನಿಯಮ ಬಾಹಿರವಾಗಿ ಗುತ್ತಿಗೆ ನೀಡಲಾಗಿದೆ ಎಂಬ ಗಂಭೀರ ಆರೋಪಗಳ ಹಿನ್ನೆಲೆಯಲ್ಲಿ ನ್ಯಾಯಾಲಯ ಈ ಮಹತ್ವದ ನಿರ್ದೇಶನ ನೀಡಿದೆ. ಸಿಬಿಐ ಈ ಕುರಿತು ವರದಿ ಸಲ್ಲಿಸಲು ನ್ಯಾಯಾಲಯ ೧೬ ವಾರಗಳ ಕಾಲಾವಕಾಶ ನೀಡಿದೆ. ಮುಖ್ಯವಾಗಿ ೨೦೧೫ ಜನವರಿ ಯಿಂದ ೨೦೨೫ರ ಡಿಸೆಂಬರ್‌ವರೆಗಿನ ಅವಧಿಯಲ್ಲಿ ನೀಡಲಾದ ಗುತ್ತಿಗೆಗಳನ್ನು ಈ ತನಿಖೆ ಒಳಗೊಳ್ಳಲಿದೆ. ತನಿಖೆಗೆ ಪೂರ್ಣ ಸಹಕಾರ ನೀಡುವಂತೆ ಅರುಣಾಚಲಪ್ರದೇಶ ಸರ್ಕಾರ ಹಾಗೂ ಸಂಬಂಧಪಟ್ಟ ಇಲಾಖೆಗಳಿಗೆ ನ್ಯಾಯಾಲಯ ಸೂಚಿಸಿದ್ದು, ಮುಂದಿನ ೪ ವಾರಗಳೊಳಗೆ ಎಲ್ಲ ದಾಖಲೆಗಳನ್ನು ಸಿಬಿಐಗೆ ಹಸ್ತಾಂತರಿಸಿ ಯಾವುದೇ ದಾಖಲೆ ನಾಶವಾಗದಂತೆ ಎಚ್ಚರ ವಹಿಸಲು ಕಟ್ಟುನಿಟ್ಟಿನ ನಿರ್ದೇಶನ ನೀಡಲಾಗಿದೆ.

**<>><><*><><<>**

ಇಂದು ಕೊಲ್ಕತ್ತಾದ ಈಡನ್‌ಗಾರ್ಡನ್ಸ್‌ನಲ್ಲಿ ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಕೊಲ್ಕತ್ತಾ ನೈಟ್ ರೈಡರ್ಸ್ ಮತ್ತು ಪಂಜಾಬ್ ಕಿಂಗ್ ತಂಡಗಳು ಮುಖಾಮುಖಿಯಾಗಲಿವೆ.  ಪಂದ್ಯ ಸಂಜೆ ೭.೩೦ಕ್ಕೆ ಆರಂಭವಾಗಲಿದೆ. ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಚೆನ್ನೈ ಸೂಪರ್ ಕಿಂಗ್ಸ್ ತಂಡದ ವಿರುದ್ಧ ೪೩ ರನ್‌ಗಳ ಭರ್ಜರಿ ಜಯ ದಾಖಲಿಸಿದೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಆರ್‌ಸಿಬಿ ನಿಗದಿತ ೨೦ ಓವರ್‌ಗಳಲ್ಲಿ ೩ ವಿಕೆಟ್ ನಷ್ಟಕ್ಕೆ ೨೫೦ ರನ್‌ಗಳ ಬೃಹತ್ ಮೊತ್ತ ಪೇರಿಸಿತು. ೨೫೧ ರನ್‌ಗಳ ಬೃಹತ್ ಗುರಿ ಬೆನ್ನತ್ತಿದ ಚೆನ್ನೈ ಸೂಪರ್ ಕಿಂಗ್ಸ್ ೧೯.೪ ಓವರ್‌ಗಳಲ್ಲಿ ತನ್ನೆಲ್ಲ ವಿಕೆಟ್ ಕಳೆದುಕೊಂಡು ೨೦೭ ರನ್ ಗಳಿಸಲಷ್ಟೇ ಶಕ್ತವಾಯಿತು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ  <>*><>**